ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

38 (136) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ 371(ಜೆ) ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಆ) ಕಲ್ಯಾಣ ಕರ್ನಾಟಕದಡಿ (ಹೈಕ) ಮೀಸಲಿಡಲಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ವಿಶ್ವವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದ ಶಿಕ್ಷಣದ ಗುಣಮಟ್ಟದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ಮಾಹಿತಿ ಒದಗಿಸುವುದು)